# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 363 |
| ಉತ್ತರಿಸಬೇಕಾದ ದಿನಾಂಕ | : | 07.07.2023 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲಾಗಿದೆಯೇ; (ವಿವರ ನೀಡುವುದು) | ಇಲ್ಲ.<br><br>ರಾಜ್ಯದಲ್ಲಿನ 240 ತಾಲ್ಲೂಕುಗಳ ಪೈಕಿ ಇದುವರೆಗೂ ಕೇವಲ 123 ತಾಲ್ಲೂಕು ಕೇಂದ್ರಗಳಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಸದರಿ ತಾಲ್ಲೂಕು ಕ್ರೀಡಾಂಗಣಗಳನ್ನು ಸುಸಜ್ಜಿತವಾಗಿ ನಿರ್ಮಿಸಲು ನೆಲಸಮತಟ್ಟು ಕಾಮಗಾರಿ, ಕ್ರೀಡಾ ಅಂಕಣಗಳ ನಿರ್ಮಾಣ, ಆವರಣ ಗೋಡೆ/ತಂತಿಬೇಲಿ, ಶೌಚಾಲಯಗಳು, ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಪೆವಿಲಿಯನ್ ಕಟ್ಟಡ ಸೇರಿದಂತೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಹಂತ-ಹಂತವಾಗಿ ಕಲ್ಪಿಸಲು ಪ್ರಸ್ತುತ 58 ಕಾಮಗಾರಿಗಳು ಪ್ರಗತಿಯಲ್ಲಿದೆ. |
| ಆ) | ಎಷ್ಟು ತಾಲ್ಲೂಕುಗಳಲ್ಲಿ ಸುಸಜ್ಜಿತ ಕ್ರೀಡಾಂಗಣಗಳು ನಿರ್ಮಾಣವಾಗಿರುವುದಿಲ್ಲ; ಇದಕ್ಕೆ ಕಾರಣಗಳೇನು; | ಕರ್ನಾಟಕ ರಾಜ್ಯದಲ್ಲಿ ಇಲ್ಲಿಯವರೆಗೂ ಒಟ್ಟು 29 ಜಿಲ್ಲಾ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ. ಸದರಿ ಕ್ರೀಡಾಂಗಣಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಸುಸಜ್ಜಿತವಾಗಿವೆ. ರಾಜ್ಯದಲ್ಲಿ ಇಲ್ಲಿಯವರೆಗೂ 123 ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದ್ದು, ಬಹುತೇಕ ಕ್ರೀಡಾಂಗಣಗಳಲ್ಲಿ ವಿವಿಧ ಸೌಲಭ್ಯಗಳ ಕೊರತೆಯಿರುತ್ತದೆ.<br><br>ಈ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಕ್ರೀಡಾಂಗಣಗಳ ಹಾಗೂ ಕ್ರೀಡಾ ವಸತಿ ನಿಲಯಗಳ ಪ್ರಸ್ತುತ ಸ್ಥಿತಿ-ಗತಿ ಕುರಿತು ಅಧ್ಯಯನ ಮಾಡಿ ವರದಿ ನೀಡಲು ಸರ್ಕಾರದ ಆದೇಶ ಸಂ.ವೈ.ಎಸ್.ಡಿ.-ಇಪಿಇ/245/2021, ದಿನಾಂಕ:22-09-2021 ರನ್ವಯ ಕ್ರೀಡಾ ಪರಿಣಿತರ ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯ ವರದಿಯಂತೆ ಕ್ರೀಡಾಂಗಣಗಳ ಹಾಗೂ ಕ್ರೀಡಾ ವಸತಿ ನಿಲಯಗಳ ಅಭಿವೃದ್ದಿಗೆ ಒಟ್ಟು ರೂ.1024.00 ಕೋಟಿ ಅನುದಾನದ ಅಗತ್ಯವಿದೆ. |

| | | |
|---|---|---|
| | | 1) ರಾಜ್ಯದಲ್ಲಿ 69 ತಾಲ್ಲೂಕು ಕೇಂದ್ರಗಳಲ್ಲಿ ನಿವೇಶನ ಲಭ್ಯವಿಲ್ಲದಿರುವುದರಿಂದ ಕ್ರೀಡಾಂಗಣ ನಿರ್ಮಾಣ ಮಾಡಲು ಸಾಧ್ಯವಾಗಿರುವುದಿಲ್ಲ.<br><br>2) ಅನುದಾನದ ಕೊರತೆಯಿಂದಾಗಿ ಎಲ್ಲಾ ತಾಲ್ಲೂಕು ಕ್ರೀಡಾಂಗಣಗಳಲ್ಲಿ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. |
| ಇ) | ಯಾವ ಕಾಲಮಿತಿಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು? | ಅನುದಾನ ಹಾಗೂ ನಿವೇಶನದ ಲಭ್ಯತೆ ಆಧರಿಸಿ, ಆದ್ಯತೆ ಮೇರೆಗೆ ಎಲ್ಲಾ ತಾಲ್ಲೂಕು ಕೇಂದ್ರದ ವ್ಯಾಪ್ತಿಯಲ್ಲಿ ಹಂತ-ಹಂತವಾಗಿ ಕ್ರೀಡಾಂಗಣಗಳನ್ನು ನಿರ್ಮಿಸಲು ಪರಿಗಣಿಸಲಾಗುವುದು |

**ಸಂಖ್ಯೆ: ವೈಎಸ್‌ಡಿ-ಇಬಿಬಿ/47/2023**

**(ಬಿ. ನಾಗೇಂದ್ರ)**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.